# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 234

ಸದಸ್ಯರ ಹೆಸರು : ಶ್ರೀ ಕೇಶವ ಪ್ರಸಾದ್ ಎಸ್.

ಉತ್ತರಿಸುವ ಸಚಿವರು : ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸುವ ದಿನಾಂಕ : 14.02.2024

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಬೆಂಗಳೂರು ನಗರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಸಂಚರಿಸುತ್ತಿರುವ ಬಿ.ಎಂ.ಟಿ.ಸಿ. ವಾಹನಗಳು ಸುಮಾರು 20 ವರ್ಷದ ಹಳೆಯದಾಗಿದ್ದು, ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕೇಂದ್ರ ಸರ್ಕಾರದ ಅಧಿಸೂಚನೆಯನ್ವಯ ಸರ್ಕಾರಿ ಸಾಮ್ಯದ ಸಂಸ್ಥೆಗಳ ವಾಹನಗಳಿಗೆ 15 ವರ್ಷ ಮಿತಿ ನಿಗಧಿಪಡಿಸಲಾಗಿರುತ್ತದೆ. ಸದರಿ ಅಧಿಸೂಚನೆಯು ದಿನಾಂಕ: 01.04.2023ರಿಂದ ಜಾರಿಯಲ್ಲಿರುತ್ತದೆ. ಇದರನ್ವಯ ನೊಂದಣಿ ದಿನಾಂಕದಿಂದ 15 ವರ್ಷ ಹಾಗೂ ಮೇಲ್ಪಟ್ಟ ವಯೋಮಿತಿಯನ್ನು ಪೂರೈಸಿರುವ ವಾಹನಗಳ ರಹದಾರಿ/ ನೊಂದಣಿ ಪತ್ರಗಳು ಸ್ವಯಂ ರದ್ದುಗೊಳ್ಳುತ್ತಿರುವ ಕಾರಣ, ಅಂತಹ ವಾಹನಗಳ ಕಾರ್ಯಾಚರಣೆಯನ್ನು ಸ್ಥಗಿತಗೊಳಿಸಿ, ಅನುಪಯುಕ್ತಗೊಳಿಸಲಾಗುತ್ತಿದೆ.<br><br>ಆದ್ದರಿಂದ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿ 20 ವರ್ಷದ ಹಳೆಯ ಬಸ್ಸುಗಳನ್ನು ಕಾರ್ಯಾಚರಿಸುತ್ತಿರುವುದಿಲ್ಲ. |
| ಆ. | ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು; ಈಗಾಗಲೇ ಸರ್ಕಾರದಿಂದ ಸ್ತ್ರೀ ಶಕ್ತಿ ಯೋಜನೆ ಜಾರಿ ಇರುವುದರಿಂದ ಹಳೆಯ ಬಸ್ಸುಗಳನ್ನು ಓಡಿಸಲಾಗುತ್ತದೆಂದು ಸಾರ್ವಜನಿಕರು ಮಾತನಾಡಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸಂಸ್ಥೆಯಲ್ಲಿ ಭೌತಿಕ ಮತ್ತು ತಾಂತ್ರಿಕವಾಗಿ ಸುಸ್ಥಿತಿಯಲ್ಲಿರುವ ಬಸ್ಸುಗಳನ್ನು ಮಾತ್ರ ಕಾರ್ಯಾಚರಣೆ ಮಾಡಲಾಗುತ್ತಿರುತ್ತದೆ.<br><br>ಮುಂದುವರೆದು, ಶಕ್ತಿ ಯೋಜನೆ ಜಾರಿಯಾದಾಗಿನಿಂದ ಸಂಸ್ಥೆಯ ಬಸ್ಸುಗಳಲ್ಲಿ ಪ್ರತಿದಿನ ಸರಾಸರಿ ಒಟ್ಟು 39,82,689 ಪ್ರಯಾಣಿಕರು ಪ್ರಯಾಣಿಸುತ್ತಿದ್ದು, ಸರಾಸರಿ 19,56,843 ಮಹಿಳಾ ಪ್ರಯಾಣಿಕರು ಪ್ರತಿ ದಿನ ಪ್ರಯಾಣಿಸುತ್ತಿದ್ದಾರೆ.<br><br>ಶಕ್ತಿ ಯೋಜನೆಯ ಅನುಷ್ಠಾನದಿಂದ ಹಳೆಯ ಬಸ್ಸುಗಳನ್ನು ಕಾರ್ಯಾಚರಣೆ ಮಾಡುತ್ತಿರುವುದಾಗಿ ಯಾವುದೇ ಸಾರ್ವಜನಿಕರಿಂದ ದೂರು ಸ್ವೀಕೃತವಾಗಿರುವುದಿಲ್ಲ. |

| | | |
|---|---|---|
| | | **ಸಂಸ್ಥೆಯಿಂದ ಕಳೆದ 04 ವರ್ಷಗಳಲ್ಲಿ ಸಿಬ್ಬಂದಿ ನೇಮಕಾತಿ ಆಗಿರುವುದಿಲ್ಲ.**<br><br>ಪ್ರಸ್ತುತ ಸಂಸ್ಥೆಯಲ್ಲಿ 2023-24ನೇ ಸಾಲಿನ ಕಾರ್ಯಯೋಜನೆಯನ್ವಯ ಪ್ರಸ್ತುತ ಅನುಮೋದನೆ ನೀಡಿರುವ 2500 ನಿರ್ವಾಹಕರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅಧಿಸೂಚನೆ ಹೊರಡಿಸುವ ಕಾರ್ಯವು ಪ್ರಗತಿಯಲ್ಲಿರುತ್ತದೆ. |
| **ಇ.** | ಹೊಸ ಬಸ್ಸುಗಳನ್ನು ಖರೀದಿಸಲು ಸರ್ಕಾರಕ್ಕೆ ಇರುವ ತೊಂದರೆಗಳೇನು? | ಪ್ರಸಕ್ತ ಸಾಲಿನಲ್ಲಿ ಈ ಕೆಳಕಂಡ ಬಸ್ಸುಗಳನ್ನು ಖರೀದಿಸುವ ಪ್ರಕ್ರಿಯೆ ಜಾರಿಯಲ್ಲಿರುತ್ತದೆ:<br>➢ 840 ಬಿ.ಎಸ್-6 ಡೀಸೆಲ್ ಬಸ್<br>➢ 921 ಎಲೆಕ್ಟ್ರಿಕ್ ಬಸ್(ಜಿಸಿಸಿ)<br>➢ 120 ಫೀಡರ್ ಸರ್ವಿಸ್ (ಜಿಸಿಸಿ)<br>➢ 05 ಡಬಲ್ ಡೆಕ್ಕರ್ ಬಸ್ ಹವಾನಿಯಂತ್ರಿತ (NCAP)<br>➢ 05 ಡಬಲ್ ಡೆಕ್ಕರ್ ಬಸ್ ಹವಾನಿಯಂತ್ರಿತ (DULT)<br>➢ ಸರ್ಕಾರದಿಂದ ಸಂಸ್ಥೆಗೆ ವಿಶೇಷ ಬಂಡವಾಳ ನೆರವಿನಡಿ ಒದಗಿಸಿರುವ ರೂ.150.00 ಕೋಟಿಗಳ ಅನುದಾನದಲ್ಲಿ 320 ಹವಾನಿಯಂತ್ರಿತ ಎಲೆಕ್ಟ್ರಿಕ್ ಬಸ್‌ಗಳನ್ನು ಕಾರ್ಯಾಚರಿಸಲು ಆಡಳಿತಾತ್ಮಕ ಅನುಮೋದನೆ ನೀಡಿ, ಮೊದಲನೇ ಕಂತಿನ ಅನುದಾನ ರೂ.9353.16 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದ್ದು, ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. |

ಸಂಖ್ಯೆ: ಟಿಡಿ 09 ಟಿಸಿಕ್ಯೂ 2024

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು